ನಿ-72 68

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಅರುಣ ಶಹಾಪೂರ ಇವರು ನಿಯಮ–72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ.**

**ವಿಷಯ: ಭಾರತೀಯ ಸಂವಿಧಾನವು ಇಡೀ ಜಗತ್ತೇ ಹೆಮ್ಮೆಪಡುವ ಅದ್ಭುತವಾಗಿರುವಂತಹ ಪಂಚಾಯತ್ ರಾಜ್ ವ್ಯವಸ್ಥೆಯನ್ನು ಕಲ್ಪಿಸಿದ್ದು, ಪ್ರತಿಯೊಬ್ಬ ನಾಗರೀಕನು ಅತ್ಯಂತ ನಿರ್ಣಾಯಕ ಮತಾಧಿಕಾರವನ್ನು ಹೊಂದಿದ್ದು, ಪಂಚಾಯತಿ ವ್ಯವಸ್ಥೆಗಳ ಪ್ರತಿನಿಧಿಗಳ ಆಯ್ಕೆಯಲ್ಲಿ ಮತ ಚಲಾಯಿಸುವ ಮೂಲಕ ಜನಾದೇಶ ದೊರಕಬೇಕು ಎನ್ನುವಂಥದ್ದು ಪ್ರಜಾತಂತ್ರದ ಆಶಯ. ಈ ಆಶಯಕ್ಕೆ ಭಂಗ ತರುವ ರೀತಿಯಲ್ಲಿ ಇಂದು ಕರ್ನಾಟಕದಲ್ಲಿ ನಡೆಯುತ್ತಿರುವ ಗ್ರಾಮ ಪಂಚಾಯತಿ ಚುನಾವಣೆಗಳಲ್ಲಿ ಅವಿರೋಧ ಆಯ್ಕೆ ಮಾಡುವ ಬದಲು ಬಹಿರಂಗ ಹರಾಜು ಮೂಲಕ ಎನ್ನುವ ವರದಿಗಳು ಆತಂಕಕಾರಿ, ಪ್ರಜಾತಂತ್ರದ ಆಶಯಗಳಿಗೆ ಅಪಾಯ ಒಡ್ಡಬಲ್ಲ ಪರಿಸ್ಥಿತಿ ನಿರ್ಮಾಣವಾಗುತ್ತಿರುವ ಬಗ್ಗೆ.**

**ಉತ್ತರ:** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 11 ರಂತೆ ಯಾವುದೇ ಗ್ರಾಮ ಪಂಚಾಯತಿಯ ಚುನಾವಣಾ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತನ್ನ ಹೆಸರಿರುವ ಪ್ರತಿಯೊಬ್ಬ ವ್ಯಕ್ತಿಯು ಗ್ರಾಮ ಪಂಚಾಯತಿಯ ಸದಸ್ಯನಾಗಿ ಚುನಾಯಿತನಾಗಲು ಅರ್ಹನಾಗಿರುತ್ತೇನೆ.

ಕರ್ನಾಟಕ ಪಂಚಾಯತ್ ರಾಜ್ (ಚುನಾವಣೆಗಳನ್ನು ನಡೆಸುವ) ನಿಯಮಗಳು, 1993 ರ ನಿಯಮ 12 ರಂತೆ ಜಿಲ್ಲಾಧಿಕಾರಿಯು ಗ್ರಾಮ ಪಂಚಾಯತಿ ಚುನಾವಣೆಗಾಗಿ ಅಧಿಸೂಚನೆಯನ್ನು ಹೊರಡಿಸಿದ ಮೇಲೆ ನಿಯಮ 14 ರಂತೆ ಪ್ರತಿಯೊಬ್ಬ ಅಭ್ಯರ್ಥಿಯು ಖುದ್ದಾಗಿ ಅಥವಾ ಅವನ ಸೂಚಕನ ಮೂಲಕ ನಾಮಪತ್ರವನ್ನು ಚುನಾವಣಾ ಅಧಿಕಾರಿಗೆ ಸಲ್ಲಿಸಬೇಕಾಗಿರುತ್ತದೆ.

ನಾಮ ಪತ್ರ ಪರಿಶೀಲನೆ, ನಾಮ ಪತ್ರ ಹಿಂಪಡೆದ ನಂತರ ಉಳಿದ ಅಭ್ಯರ್ಥಿಗಳಿಗಾಗಿ ಮತದಾನವನ್ನು ನಡೆಸಲಾಗುತ್ತದೆ. ತದನಂತರ ಚುನಾವಣಾ ಫಲಿತಾಂಶ ಘೋಷಣೆ ಮಾಡಿ ಅಭ್ಯರ್ಥಿಗಳನ್ನು ಆಯ್ಕೆಯಾಗಿರುವುದಾಗಿ ಘೋಷಿಸಲಾಗುತ್ತದೆ.

ರಾಜ್ಯದಲ್ಲಿ ಅವಧಿ ಪೂರ್ಣಗೊಂಡಿರುವ ಗ್ರಾಮ ಪಂಚಾಯತಿಗಳಿಗೆ ಚುನಾವಣೆ ನಡೆಸಲು ಜಿಲ್ಲಾಧಿಕಾರಿಗಳು ಅಧಿಸೂಚನೆ ಹೊರಡಿಸಿರುತ್ತಾರೆ.

ರಾಜ್ಯದ ಬಳ್ಳಾರಿ, ಮಂಡ್ಯ, ತುಮಕೂರು, ಕಲಬುರಗಿ, ವಿಜಯಪುರ, ರಾಯಚೂರು, ಹಾಸನ ಜಿಲ್ಲೆಗಳ ಕೆಲವು ಗ್ರಾಮ ಪಂಚಾಯಿತಿಗಳ ಸದಸ್ಯ ಸ್ಥಾನಗಳನ್ನು ಹರಾಜು ಮಾಡಿರುವ ಆರೋಪವು ಕನ್ನಡ ದಿನಪತ್ರಿಕೆಗಳಾದ ವಿಜಯ ಕರ್ನಾಟಕ, ಕನ್ನಡ ಪ್ರಭ, ಸಂಯುಕ್ತ ಕರ್ನಾಟಕ ಇನ್ನಿತರ ಪತ್ರಿಕೆಗಳಲ್ಲಿ ದಿನಾಂಕ: 08–12–2020 ರಂದು ಸುದ್ದಿ ಪ್ರಕಟಗೊಂಡಿದೆ. ಗ್ರಾಮ ಪಂಚಾಯತಿಗಳ ಸದಸ್ಯ ಸ್ಥಾನಗಳನ್ನು ಹರಾಜು ಮಾಡಲಾಗಿದೆ ಎಂಬ ಆರೋಪಗಳಲ್ಲಿ ಸತ್ಯಾಂಶವಿದ್ದರೆ ಇದೊಂದು ಗಂಭೀರ ದುರ್ನಡತೆ ಮತ್ತು ಅವ್ಯವಹಾರವಾಗುತ್ತದೆ ಹಾಗೂ ಇದನ್ನು ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಗಂಭೀರವಾಗಿ ಪರಗಣಿಸಬೇಕಾಗುತ್ತದೆ.

ಪತ್ರಿಕಾ ವರದಿಯನ್ನು ಪರಿಶೀಲಿಸಿ ಕಾನೂನು ರೀತ್ಯಾ ಕ್ರಮ ಕೈಗೊಳ್ಳುವಂತೆ ರಾಜ್ಯ ಚುನಾವಣಾ ಆಯೋಗವನ್ನು ದಿನಾಂಕ:08–12–2020 ರಂದು ಕೋರಲಾಗಿದೆ.

(ಕೆ.ಎಸ್ ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಸಂಖ್ಯೆ. ಗ್ರಾಅಪ 904 ಗ್ರಾಪಂಅ 2020.